# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 11/ಸಭೆ/ಪಿಆರ್/ /2021–22

ದಿನಾಂಕ : 05/02/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020–21 ದಿನಾಂಕ 21/09/2020ರ ಆದೇಶದ ಅನ್ವಯ ಕುವೆಂಪುನಗರಕ್ಕೆ ಸಂಬಂಧಿಸಿದಂತೆ ವಾರ್ಡ್ ನಂ 11 ಕುವೆಂಪುನಗರ ವಾರ್ಡ್ ಕಛೇರಿಯಲ್ಲಿ ದಿನಾಂಕ 05/02/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಪ್ರಸನ್ನ ವೆಂಕಟೇಶ್, ನೋಡಲ್ ಅಧಿಕಾರಿ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀಮತಿ ರಮ್ಯ, ಕಂದಾಯ ಪರಿವೀಕ್ಷಕರು
4. ಶ್ರೀ ಭಾರ್ಗವ್, ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀಮತಿ ಕಾಂತಮಣಿ, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ಸದಸ್ಯರು/ ಸಾರ್ವಜನಿಕರು**

1. ಶ್ರೀ ಮೋಹನ್ ಸಿಂಗಾಪುರ
2. ಶ್ರೀ ಗುರುಪ್ರಸಾದ್, ಸಿಂಗಾಪುರ ಪ್ಯಾರಡೈಸ್ ಸದಸ್ಯರು
3. ಶ್ರೀ ವಿನೋದ್, ಪ್ರಕೃತಿ ಲೇಔಟ್
4. ಶ್ರೀ ಭರತ್, ಸಿಂಗಾಪುರ

**ಶ್ರೀ ಪ್ರಸನ್ನ ವೆಂಕಟೇಶ್, ನೋಡೆಲ್ ಅಧಿಕಾರಿ:–** ಸಭೆಗೆ ಹಾಜರಿದ್ದ ಅಧಿಕಾರಿಗಳಿಗೆ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

**ಶ್ರೀ ಮೋಹನ್:–** ವಾರ್ಡ್ ವ್ಯಾಪ್ತಿಯಲ್ಲಿ ಜಿಯೋ ವತಿಯಿಂದ ಔಈಅ ಕೇಬಲ್ ಅಳವಡಿಸಿದ ನಂತರ ರಸ್ತೆಯನ್ನು ಸರಿಯಾಗಿ ದುರಸ್ಥಿಪಡಿಸದೆ ಇರುವುದರಿಂದ ರಸ್ತೆಯಲ್ಲಿ ಅಲ್ಲಲ್ಲಿ ಗುಂಡಿಗಳು ಬಿದ್ದಿದ್ದು ಸಾರ್ವಜನಿಕರು ಹಾಗೂ ವಾಹನ ಸವಾರರ ಸಂಚಾರಕ್ಕೆ ತೊಂದರೆಯಾಗುತ್ತಿರುವುದರಿಂದ ಸರಿಪಡಿಸಲು ಕೋರಿದರು.

**ಉತ್ತರ:–** ಸಹಾಯಕ ಅಭಿಯಂತರರು ಮಾತನಾಡುತ್ತಾ ಪರಿಶೀಲಿಸಿ ಕ್ರಮವಹಿಸುವುದಾಗಿ ತಿಳಿಸಿದರು.

**ಸಿಂಗಾಪುರ ಪ್ಯಾರಡೈಸ್** ವ್ಯಾಪ್ತಿಯಲ್ಲಿ ಬೀದಿ ದೀಪಗಳು ಇಲ್ಲದೆ ಇರುವುದರಿಂದ ಸ್ಥಳೀಯ ನಿವಾಸಿಗಳು ರಾತ್ರಿಯ ಸಮಯದಲ್ಲಿ ಓಡಾಡಲು ತೊಂದರೆಯಾಗುತ್ತಿರುವುದರಿಂದ ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಕೋರಿದರು.

**ಉತ್ತರ:–** ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ ಈ ಬಗ್ಗೆ ಸಂಬಂಧ ಪಟ್ಟ ಇಲಾಖೆಗೆ ತಿಳಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

ಸಾರ್ವಜನಿಕರು ಕಾವೇರಿ ನೀರು ಮತ್ತು ಕೊಳವೆ ನೀರಿನ ಸಮಸ್ಯ ತೀವ್ರವಾಗಿದ್ದು, ಕೊಳವೆ ಬಾವಿ ಮೋಟಾರ್ ದುರಸ್ಥಿಯಾಗಿರುವ ಕಾರಣ ಕುವೆಂಪುನಗರದ ಕೆಲವು ರಸ್ತೆಗಳಲ್ಲಿ ನೀರಿನ ಅಭಾವ ಉಂಟಾಗಿದ್ದು, ಸಮಸ್ಯಯನ್ನು ಪರಿಹರಿಸಿಕೊಡುವಂತೆ ಸಾರ್ವಜನಿಕರು ಸಭೆಯಲ್ಲಿ ಕೋರಿದರು.

**ಉತ್ತರ** :- ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ನಂ 11, ಕುವೆಂಪುನಗರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.